ದಿನಾಂಕಃ **06-01-2026** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲುಃಪ್ರತಿವಾದಿ ಪರ ವಕೀಲರಾದ ಶ್ರೀ ಟಿ.ಎಲ್.ಎನ್.ರವರಿಂದಃ</u>

**1.** ನನ್ನ ತಂದೆಗೆ ಸೇರಿದ ಕೃಷಿ ಭೂಮಿಯಲ್ಲಿ ಪ್ರತಿವಾದಿಗಳು ಉಳುಮೆ ಮಾಡುತ್ತಿದ್ದರು ಎಂದರೆ ಸರಿಯಲ್ಲ. ಪ್ರತಿವಾದಿಗಳು ನಮ್ಮ ಜಮೀನಿನನ್ನು ಬಿಟ್ಟು ಹೋದರು ಎಂಬ ಕಾರಣಕ್ಕೆ ಅವರ ವಿರುದ್ಧ ಸುಳ್ಳು ದಾವೆಯನ್ನು ಹೂಡಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿ ಪ್ರತಿವಾದಿಗಳ ಹೆಬ್ಬೆಟ್ಟಿನ ಗುರುತು ಇಲ್ಲ ಎಂದರೆ ಸರಿ. ಸಾಕ್ಷಿಯ ಸಹಿ ಇದೆ ಎಂದು ನುಡಿಯುತ್ತಾರೆ. ನಿಪಿ-1(ಎ)(ಬಿ), 2(ಎ)(ಬಿ) ನಾನೇ ಸೃಷ್ಟಿಸಿರುವ ಸಹಿಗಳು ಎಂದರೆ ಸರಿಯಲ್ಲ. ದಾವೆಯನ್ನು ಹೂಡುವ ಪೂರ್ವದಲ್ಲಿ ಬೇರೆ ವಕೀಲರ ಮೂಲಕ ಪ್ರತಿವಾದಿಗಳಿಗೆ ನೋಟೀಸ್ ಕೊಡಿಸಿದ್ದೇನೆ ಎಂದರೆ ಸರಿ. ಪ್ರಸ್ತುತ ಪ್ರಕರಣದಲ್ಲಿ ಶ್ರೀ ಡಿ.ಹೆಚ್. ಕೃಷ್ಣರವರು ನನ್ನ ಪರವಾಗಿ ವಕಾಲತ್ತನ್ನು ಹಾಕಿದ್ದಾರೆ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಗುರುತಿಸುವ ವಕೀಲರು ಜಾಗದಲ್ಲಿ ನಾನೇ ಗುರುತಿಸಿದ್ದೇನೆ ಎಂದರೆ ಸರಿ. ಪ್ರಸ್ತುತ ದಾವೆಯಲ್ಲಿ ನಾನು ವಕೀಲರನ್ನು ನೇಮಿಸಿಕೊಂಡಿದ್ದರು ಸಹ ನಾನೇ ಗುರುತಿಸುವ ವಕೀಲನಾಗಿ ಸಹಿ ಹಾಕಿದ್ದೇನೆ ಎಂದರೆ ಸರಿ. ಸಾಕ್ಷಿಯು ತಪ್ಪಿನಿಂದ ಆಗಿದೆ, ಅದನ್ನು ಸರಿಪಡಿಸಿಕೊಳ್ಳಲು ಕಾಲಾವಕಾಶ ಕೊಟ್ಟಲ್ಲಿ, ಸರಿ ಪಡಿಸಿಕೊಳ್ಳುತ್ತೇನೆ ಎಂದು ನುಡಿಯುತ್ತಾರೆ.

ಈ ಹಂತದಲ್ಲಿ ವಕೀಲರ ಕೋರಿಕೆಯ ಮೇರೆಗೆ ಮುಂದುವರೆದ ಪಾಟೀ ಸವಾಲಿಗಾಗಿ ಮುಂದೂಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು).

**ಓ. ಹೇ. ಕೇ. ಸ. ಇದೆ.**

**ಪ್ರದಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**

**ಸಾಕ್ಷಿದಾರರ ಸಹಿ.** **ಪಾಂಡವಪುರ.**